# 2021ರ ಜನಗಣತಿ ಆಧರಿಸಿ ಬಿಬಿಎಂಪಿ ಚುನಾವಣೆ?

ವಿ.ವಾ. 3-2-21

**ಬೆಂಗಳೂರು:** ರಾಜಧಾನಿಯ ಸ್ಥಳೀಯ ಆಡಳಿತ ಸಂಸ್ಥೆಯಾದ ಬಿಬಿಎಂಪಿ ಚುನಾವಣೆಯನ್ನು 2021ರ ಜನಗಣತಿ ಅನ್ವಯ ನಡೆಸಲು ಅವಕಾಶ ನೀಡುವಂತೆ ಸುಪ್ರೀಂಕೋರ್ಟ್‌ಗೆ ಮನವಿ ಸಲ್ಲಿಸಲು ರಾಜ್ಯ ಸರ್ಕಾರ ಮುಂದಾಗಿದೆ.

ಬಿಬಿಎಂಪಿ ಚುನಾವಣೆ ಕುರಿತು ಫೆ.5ಕ್ಕೆ ಸುಪ್ರೀಂಕೋರ್ಟ್‌ನಲ್ಲಿ ವಿಚಾರಣೆಯಿದೆ. 2011ರ ಜನಗಣತಿ ಆಧರಿಸಿ ಚುನಾವಣೆ ನಡೆಸಿದಲ್ಲಿ ಅಭಿವೃದ್ಧಿ ಕಾರ್ಯಕ್ಕೆ ಹಿನ್ನಡೆಯಾಗಲಿದೆ. ಹೀಗಾಗಿ, ಅಂತಾರಾಷ್ಟ್ರೀಯ ಸೌಲಭ್ಯ ಹೊಂದಿದ ಬೆಂಗಳೂರಿನ ಸಮಗ್ರ ಅಭಿವೃದ್ಧಿಗೆ 2021ರಲ್ಲಿ ನಡೆಸುವ ಜನಗಣತಿ ಆಧರಿಸಿ ಚುನಾವಣೆ ನಡೆಸಲು ಅನುಮತಿ ನೀಡುವಂತೆ ಮನವಿ ಸಲ್ಲಿಸಲು ಸರ್ಕಾರ ಸಿದ್ಧತೆ ಮಾಡಿಕೊಂಡಿದೆ. ಒಂದು ವೇಳೆ ಜನಗಣತಿ ಆಧರಿಸಿ ಚುನಾವಣೆ ನಡೆಸುವುದಾದರೆ ಕನಿಷ್ಠ 2 ವರ್ಷ ಪಾಲಿಕೆಗೆ ಜನಪ್ರತಿನಿಧಿಗಳು ಆಯ್ಕೆಯಾಗುವುದಿಲ್ಲ ಎಂಬುದು ಖಚಿತವಾಗುತ್ತದೆ ಎಂದು ಮೂಲಗಳಿಂದ ತಿಳಿದುಬಂದಿದೆ.



» **ಸರ್ಕಾರದಿಂದ ಸುಪ್ರೀಂ ಕೋರ್ಟ್‌ಗೆ ಮನವಿ ಸಾಧ್ಯತೆ**

ಬಿಬಿಎಂಪಿ ಕಾರ್ಪೊರೇಟರ್‌ಗಳ ಅಧಿಕಾರ ಪೂರ್ಣಗೊಂಡು ಈಗಾಗಲೇ 5 ತಿಂಗಳು ಕಳೆದಿದ್ದು, ಆಡಳಿತಾಧಿಕಾರಿ ಅಧಿಕಾರ ನಡೆಸುತ್ತಿದ್ದಾರೆ. ಆದರೆ, ಚುನಾವಣೆ ಮುಂದೂಡುವುದನ್ನು ಮನಗಂಡಿದ್ದ ಪಾಲಿಕೆ ಸದಸ್ಯರು ನಿಗದಿತ ವೇಳೆಗೆ ಚುನಾವಣೆ ನಡೆಸುವಂತೆ ಹೈಕೋರ್ಟ್ ಮೆಟ್ಟಿಲೇರಿದ್ದರು. ಆದರೂ, ಸರ್ಕಾರ ಬಿಬಿಎಂಪಿಗೆ ಹೊಸ ಕಾಯ್ದೆ ರೂಪಿಸಿ, 243 ವಾರ್ಡ್ ರಚಿಸಿ ಚುನಾವಣೆ ನಡೆಸುವಂತೆ ಮನವಿ ಮಾಡಿತ್ತು. ಈ ಕುರಿತು ವಿಚಾರಣೆ ನಡೆಸಿದ್ದ ಹೈಕೋರ್ಟ್ ಹೊಸ ಕಾಯ್ದೆಯನ್ನು ಮುಂದಿನ ಅವಧಿಗೆ ಅನ್ವಯ ಮಾಡಿಕೊಳ್ಳುವಂತೆ ಸೂಚಿಸಿ, 6 ತಿಂಗಳೊಳಗೆ ಚುನಾವಣೆ ನಡೆಸುವಂತೆ ತೀರ್ಪು ನೀಡಿತ್ತು.

ಹೈಕೋರ್ಟ್ ತೀರ್ಪಿನ ವಿರುದ್ಧ ಸರ್ಕಾರ ಸುಪ್ರೀಂಕೋರ್ಟ್ ಮೆಟ್ಟಿಲೇರಿದ್ದು, ಹೊಸ ಕಾಯ್ದೆ ಅನ್ವಯ ಚುನಾವಣೆ ನಡೆಸಲು ಅನುಮತಿ ನೀಡುವಂತೆ ಮನವಿ ಮಾಡಿದೆ. ಮೊದಲ ವಿಚಾರಣೆಯಲ್ಲಿ ರಾಜ್ಯ ಸರ್ಕಾರ ಮತ್ತು ಚುನಾವಣಾ ಆಯೋಗದಿಂದ ಮಾಹಿತಿ ಪಡೆದ ನ್ಯಾಯಪೀಠ, ವಿಚಾರಣೆ ಮುಂದೂಡಿದೆ. ಸರ್ಕಾರವೀಗ ಬಿಬಿಎಂಪಿಗೆ ಹೊಸ ಕಾಯ್ದೆ ಮತ್ತು 243 ವಾರ್ಡ್‌ಗಳನ್ನು ರಚಿಸುವ ಸಂಬಂಧ ಗಡಿ ಗುರುತಿಸಲು ಸಮಿತಿ ರಚಿಸಿದೆ. ಈ ವಿಚಾರ ಮುಂದಿಟ್ಟುಕೊಂಡು ಕನಿಷ್ಠ 6 ತಿಂಗಳಿಗೂ ಅಧಿಕ ಅವಧಿವರೆಗೆ ಚುನಾವಣೆ ಮುಂದೂಡಲು ಸಿದ್ಧವಾಗಿದೆ.